## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1010(1087) |
| ಸದಸ್ಯರ ಹೆಸರು | : | ಶ್ರೀ ಸಿ.ಎನ್.ಮಂಜೇಗೌಡ |
| ಉತ್ತರಿಸುವ ದಿನಾಂಕ | : | 27.08.2026 |
| ಉತ್ತರಿಸುವ ಸಚಿವರು | : | ನಗರಾಭಿವೃದ್ಧಿ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದ ನಗರಾಭಿವೃದ್ಧಿ ಪ್ರಾಧಿಕಾರಗಳ ಖಾಯಂ ನೌಕರರು ಹಾಗೂ ಅವರ ಕುಟುಂಬದವರಿಗೆ 'ಜೋತಿ ಸಂಜೀವಿನಿ' ಮತ್ತು 'ಆರೋಗ್ಯ ಭಾಗ್ಯ' ಯೋಜನೆಗಳಡಿ ನಗದು ರಹಿತ ಚಿಕಿತ್ಸೆ ಜಾರಿಯಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ನಗರಾಭಿವೃದ್ಧಿ ಪ್ರಾಧಿಕಾರಗಳ (ಸ್ವಾಯತ್ತ ಸಂಸ್ಥೆಗಳ) ನೌಕರರಿಗೆ ನಗದು ರಹಿತ ವೈದ್ಯಕೀಯ ಚಿಕತ್ಸೆಗಳನ್ನು ಒದಗಿಸಲು ಸರ್ಕಾರದ ಜ್ಯೋತಿ ಸಂಜೀವಿನಿ ಮತ್ತು ಆರೋಗ್ಯ ಭಾಗ್ಯ ಯೋಜನೆಗಳನ್ನು ಅಳವಡಿಸಿಕೊಳ್ಳುವ ಕುರಿತು ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್ ಇವರೊಂದಿಗೆ ಸಮಾಲೋಚಿಸಿ ಯೋಜನೆಗಳನ್ನು ಅನುಷ್ಠಾನಗೊಳಿಸುವ ಕುರಿತು ಸಮಗ್ರ ವರದಿ ಸಲ್ಲಿಸುವಂತೆ ಆಯುಕ್ತರು, ಮೈಸೂರು ಅಭಿವೃದ್ಧಿ ಪ್ರಾಧಿಕಾರ, ಮೈಸೂರು ಇವರಿಗೆ ಸರ್ಕಾರದ ದಿನಾಂಕ 02.11.2021ರ ಪತ್ರದಲ್ಲಿ ನಿರ್ದೇಶನ ನೀಡಲಾಗಿದೆ.<br><br>ಆಯುಕ್ತರು, ಮೈಸೂರು ಅಭಿವೃದ್ಧಿ ಪ್ರಾಧಿಕಾರ, ಮೈಸೂರು ಇವರು ರಾಜ್ಯದ ಎಲ್ಲಾ ನಗರಾಭಿವೃದ್ಧಿ ಪ್ರಾಧಿಕಾರಗಳ ಖಾಯಂ ನೌಕರರು ಮತ್ತು ಅವರ ಕುಟುಂಬ ಅಲಂಬಿತರ ವಿವರಗಳನ್ನು ಪಡೆದು ಪ್ರಾಧಿಕಾರದ ದಿನಾಂಕ 16.09.2021 ರೊಂದಿಗೆ ಕಾರ್ಯಕಾರಿ ನಿರ್ದೇಶಕರು, ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಬೆಂಗಳೂರು ಇವರಿಗೆ ಕಳುಹಿಸಿ ಪ್ರಾಧಿಕಾರವಾರು ಜ್ಯೋತಿ ಸಂಜೀವಿನಿ ಯೋಜನೆಗಳನ್ನು ಅಳವಡಿಸಿಕೊಳ್ಳಲು ಅಂದಾಜು ವೆಚ್ಚದ ವಿವರಗಳ ವರದಿಯನ್ನು ನೀಡುವಂತೆ ಕೋರಲಾಗಿದ್ದು, ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್ , ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಬೆಂಗಳೂರು ಇವರಿಂದ ವರದಿಯನ್ನು ನಿರೀಕ್ಷಿಸಲಾಗಿದೆ. |
| ಆ) | ಈ ಯೋಜನೆಗಳನ್ನು ಅನುಷ್ಠಾನಗೊಳಿಸಲು ನೋಡಲ್ ಅಧಿಕಾರಿಯನ್ನು ನೇಮಿಸಿ ಮೂರು ವರ್ಷ ಕಳೆದರು ಇದುವರೆಗೆ ಜಾರಿಯಾಗದಿರಲು ಕಾರಣವೇನು; | |
| ಇ) | ನಗದು ರಹಿತ ಚಿಕಿತ್ಸಾ ಸೌಲಭ್ಯವಿಲ್ಲದೆ ತುರ್ತು ಸಂದರ್ಭಗಳಲ್ಲಿ ನೌಕರರು ಎದುರಿಸುತ್ತಿರುವ ತೊಂದರೆಗಳ ಕುರಿತು ಸರ್ಕಾರದ ಗಮನಕ್ಕೆ ಬಂದಿದೆಯೇ; | ಯಾವುದೇ ಪ್ರಕರಣ ಕಂಡುಬಂದಿರುವುದಿಲ್ಲ. |

| | | |
|---|---|---|
| ಈ) | ಹಾಗಿದ್ದಲ್ಲಿ, ಎಲ್ಲಾ ಪ್ರಾಧಿಕಾರಗಳ ನೌಕರರಿಗೆ ಈ ಯೋಜನೆಗಳ ಸೌಲಭ್ಯವನ್ನು ತಕ್ಷಣವೇ ವಿಸ್ತರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು? | ಸದರಿ ವರದಿಯು ಸ್ವೀಕೃತವಾದ ಕೂಡಲೇ ನಗರಾಭಿವೃದ್ಧಿ ಪ್ರಾಧಿಕಾರಗಳ ನೌಕರರಿಗೆ ನಗದು ರಹಿತ ವೈದ್ಯಕೀಯ ಚಿಕಿತ್ಸೆ ಯೋಜನೆಯನ್ನು ಅನುಷ್ಠಾನಗೊಳಿಸಲು ಕ್ರಮವಹಿಸಲಾಗುವುದು. |

ಸಂಖ್ಯೆ: ನಅಇ 283 ಬೆಂರೂಪ್ರಾ 2026 (ಇ-ಕಡತ)

**(ಡಾ. ಯತೀಂದ್ರ ಸಿದ್ದರಾಮಯ್ಯ)**
ನಗರಾಭಿವೃದ್ಧಿ ಸಚಿವರು